ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 22/12/20

# ಮಸ್ಕಿ ಬಿಜೆಪಿ ಅಭ್ಯರ್ಥಿ ಪಾಟೀಲ್ ಕುಟುಂಬದ ಐವರಿಗೆ ಕೊರೊನಾ

**ರಾಯಚೂರು:** ಜಿಲ್ಲೆಯ ಮಸ್ಕಿ ಕ್ಷೇತ್ರದ ಉಪ ಚುನಾವಣೆ ಬಿಜೆಪಿ ಅಭ್ಯರ್ಥಿ ಹಾಗೂ ಮಾಜಿ ಶಾಸಕ ಪ್ರತಾಪಗೌಡ ಪಾಟೀಲ್ ಕುಟುಂಬದ ಐವರು ಸದಸ್ಯರಿಗೆ ಬುಧವಾರ ಕೊರೊನಾ ಸೋಂಕು ದೃಢಪಟ್ಟಿದೆ.

ಪ್ರತಾಪಗೌಡ ಪಾಟೀಲ್ ಅವರಿಗೆ ಉಪ ಚುನಾವಣೆ ಮತದಾನ ಪೂರ್ವದಲ್ಲಿಯೇ ಕೊರೊನಾ ಪಾಸಿಟಿವ್ ದೃಢಪಟ್ಟಿತ್ತು. ಈ ಹಿನ್ನೆಲೆಯಲ್ಲಿ ಅವರು ಹೋಂ ಕ್ವಾರಂಟೈನ್‌ಗೆ ಒಳಗಾಗಿದ್ದರು. ಪ್ರಚಾರದಿಂದಲೂ ದೂರ ಉಳಿದು ಮಾಧ್ಯಮಗಳ ಮೂಲಕ ಮತದಾರರಿಗೆ ಮನವಿ ಮಾಡಿದ್ದರು. ಪಿಪಿಇ ಕಿಟ್ ಧರಿಸಿ ಮತದಾನ ಮಾಡಿದ್ದರು. ಈಗ ಪ್ರತಾಪಗೌಡ ಪಾಟೀಲ್ ಅವರ ಪತ್ನಿ ಪದ್ಮಾವತಿ, ಪುತ್ರ ಚೇತನ ಪಾಟೀಲ್, ಪುತ್ರಿ ಪ್ರಿಯಾ ಪಾಟೀಲ್ ಹಾಗೂ ಇಬ್ಬರು ಸಂಬಂಧಿಕರು ಸೇರಿದಂತೆ ಐವರಿಗೆ ಕೊರೊನಾ ಪಾಸಿಟಿವ್ ದೃಢಪಟ್ಟಿದೆ. ಮಸ್ಕಿ ಪಟ್ಟಣದ ಗ್ರೀನ್ ಸಿಟಿಯಲ್ಲಿನ ಅತಿಥಿಗೃಹದಲ್ಲಿ ಐಸೋಲೇಷನ್ ಮಾಡಲಾಗಿದೆ. ಪ್ರತಾಪಗೌಡ ಪಾಟೀಲ್ ಅವರ ಕಿಲ್ಲಾ ನಿವಾಸಕ್ಕೆ ಪುರಸಭೆ ಸಿಬ್ಬಂದಿ ಸಂಪೂರ್ಣ ಸ್ಯಾನಿಟೈಸ್ ಮಾಡಿದ್ದಾರೆ.